ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಕೊಡಗು ಜಿಲ್ಲೆಯ ನಾಪಂಡ ಕಾಡು ಬಳಿ ಸೇತುವೆ ನಿರ್ಮಾಣ ಮಾಡುವ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ(ವಿಧಾನಸಭೆಯಿಂದ ಚುನಾಯಿತರಾದವರು) -

1116 (1174) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕೊಡಗು ಜಿಲ್ಲೆಯ ಅವಂಡಿ ಗ್ರಾಮದ ನಾಪಂಡ ಕಾಡು ಎಂಬಲ್ಲಿ ಮುಕ್ಕೋಡ್ಲು ಹೊಳೆಗೆ ಸೇತುವೆ ನಿರ್ಮಾಣವಾಗದಿರುವುದರಿಂದ ಜಿಲ್ಲೆಯಲ್ಲಿ ಸತತವಾಗಿ ಸಂಭವಿಸಿದ ಪ್ರಕೃತಿ ವಿಕೋಪ ಹಾಗೂ ಪ್ರವಾಹದ ಸಂದರ್ಭದಲ್ಲಿ ಆ ಭಾಗದ ಜನರ ಸಂಚಾರಕ್ಕೆ ತೊಂದರೆಯಾಗಿ ಸಾವು-ನೋವುಗಳು ಸಂಭವಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಅತ್ಯವಶ್ಯಕವಾಗಿ ಮತ್ತು ತುರ್ತಾಗಿ ಆಗಬೇಕಾದ ಸದರಿ ಸೇತುವೆ ನಿರ್ಮಾಣದ ಬಗ್ಗೆ ಸರ್ಕಾರ ಇದುವರೆಗೂ ಕ್ರಮ ವಹಿಸದಿರಲು ಕಾರಣಗಳೇನು;

(ಇ) ಯಾವ ಕಾಲಮಿತಿಯೊಳಗೆ ಸದರಿ ಸೇತುವೆ ನಿರ್ಮಾಣ ಕಾಮಗಾರಿಯನ್ನು ಕೈಗೊಳ್ಳಲಾಗುವುದು?